ಶ್ರೀ ಕೆ.ಎಚ್.ರಂಗನಾಥ್ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು):

ಅ) 1599.65 ಹೆಕ್ಟೇರ್.

ಆ) ತುರುವೇಕೆರೆ ತಾಲ್ಲೂಕಿನ ಯಾವುದೇ ಅರಣ್ಯ ಪ್ರದೇಶದಲ್ಲಿ ಅಕ್ರಮ ಸಾಗುವಳಿ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಇ) ಅನ್ವಯಿಸುವುದಿಲ್ಲ.

ಗುಂಡ್ಲುಪೇಟೆ ತಾಲ್ಲೂಕು ಕಬ್ಬಳ್ಳಿ ಗ್ರಾಮದ ಸರ್ಕಾರಿ ಪಶು ಚಿಕಿತ್ಸಾಲಯ ಕುರಿತು.

2921(3745)

ಶ್ರೀ ಮಹದೇವ ಪ್ರಸಾದ್ ಹೆಚ್.ಎಸ್.(ಗುಂಡ್ಲುಪೇಟೆ): ಮಾನ್ಯ ಪಶುಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಾಮರಾಜನಗರ ಜಿಲ್ಲೆ ಗುಂಡ್ಲುಪೇಟೆ ತಾಲ್ಲೂಕು, ಕಬ್ಬಳ್ಳಿ ಗ್ರಾಮದಲ್ಲಿ ಸರ್ಕಾರಿ ಪಶು ಚಿಕಿತ್ಸಾಲಯವಿರುವುದು ಸರ್ಕಾರಕ್ಕೆ ತಿಳಿದಿದೆಯೇ?

ಆ) ಈ ಆಸ್ಪತ್ರೆಯಲ್ಲಿ ಮಂಜೂರಾದ ಹುದ್ದೆಗಳೆಷ್ಟು; ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು? ವಿವರ ನೀಡುವುದು)

ಇ) ಪಶು ವೈದ್ಯಾಧಿಕಾರಿಗಳು ಕೇಂದ್ರ ಸ್ಥಾನದಲ್ಲಿ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ ಈ ಸಮಸ್ಯೆಗಳಿಗೆ ಸರ್ಕಾರ ಕೈಗೊಂಡ ಕ್ರಮ ಏನು?

ಶ್ರೀ ಎ.ಕೃಷ್ಣಪ್ಪ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು):

ಅ) ತಿಳಿದಿದೆ.

ಆ) ಮಂಜೂರಾದ ಹುದ್ದೆಗಳು ಒಟ್ಟು - 5

1. ಪಶುವೈದ್ಯಾಧಿಕಾರಿ - 1

2. ಪಶು ಪರೀಕ್ಷಕರು - 1

3. ಪಶುವೈದ್ಯ ಸಹಾಯಕರು	-	1
4. 'ಡಿ' ದರ್ಜೆ ನೌಕರರು	-	2
ಒಟ್ಟು	-	5
ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ:	:	2
1. ಪಶುವೈದ್ಯಾಧಿಕಾರಿ	-	1
2. 'ಡಿ' ದರ್ಜೆ ನೌಕರರು	-	1
ಒಟ್ಟು	-	2

ಇ) ಬಂದಿದೆ. ಪಶುವೈದ್ಯಾಧಿಕಾರಿಯವರನ್ನು ಇತ್ತೀಚೆಗೆ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿದ್ದು ವಸತಿ ಸೌಕರ್ಯ ಸಿಕ್ಕದೇ ಇರುವುದರಿಂದ ಕೇಂದ್ರ ಸ್ಥಾನದಲ್ಲಿ ಇರುವುದಿಲ್ಲ.

ಈ) ಕೇಂದ್ರ ಸ್ಥಾನದಲ್ಲಿ ಇರುವಂತೆ ಸದರಿ ಅಧಿಕಾರಿಗೆ ನಿರ್ದೇಶಿಸಲಾಗಿದೆ.

ರಾಜ್ಯದಲ್ಲಿ ಉರ್ದು ಅಕಾಡೆಮಿಗಳಿಗೆ ಹೆಚ್ಚಿನ ಅನುದಾನ.

2923(3675)

ಶ್ರೀ ಎಂ.ಜಿ.ಮುಳೆ(ಬಸವಕಲ್ಯಾಣ): ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರಾಜ್ಯ ಸಚಿವೆಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಉರ್ದು ಭಾಷೆ ಮಾತನಾಡುವ ಜನರ ಸಂಖ್ಯೆ ಗಣನೀಯ ಪ್ರಮಾಣದಲ್ಲಿ ಇರುವುದರಿಂದ ಉರ್ದು ಅಕಾಡೆಮಿಗೆ ಕಳೆದ 3 ವರ್ಷಗಳಿಂದ ಒದಗಿಸಿರುವ ಅನುದಾನದ ಪ್ರಮಾಣವೆಷ್ಟು?

ಆ) ಉರ್ದು ಅಕಾಡೆಮಿಗೆ ಒದಗಿಸಿರುವ ಅನುದಾನದ ಪ್ರಮಾಣ ತುಂಬಾ ಕಡಿಮೆಯಾಗುವುದರಿಂದ ಉರ್ದು ಅಕಾಡೆಮಿಯ ಕಾರ್ಯಕ್ರಮಗಳು ನಡೆಸುವುದಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?